ಇ) ಹಾಗಿದ್ದಲ್ಲಿ ಈ ಯೋಜನೆಯನ್ನು ಅನುಷ್ಠಾನಗೊಳಿಸಲು ಸರ್ಕಾರದವರು ಕ್ರಮಕ್ಕೆಗೊಳ್ಳುವರೇ?

ಶ್ರೀ ಕೆ.ಎಂ. ಕೃಷ್ಣಾರೆಡ್ಡಿ (ಸಮಾಜ ಕಲ್ಯಾಣ ಸಚಿವರು) :—

ಅ) ಕಳೆದ ಎರಡು ವರ್ಷಗಳಲ್ಲಿ ವೈಯಕ್ತಿಕ ಹಾಗೂ ಗಂಗಾ ಕಲ್ಯಾಣ ಕೊಳವೆಬಾವಿ ಯೋಜನೆಯಡಿ ಯಾವುದೇ ಕೊಳವೆಬಾವಿಗಳನ್ನು ಕೊರೆದಿರುವುದಿಲ್ಲ.

ಆ) ಇಲ್ಲ

ಇ) ಗುಳೇದಗುಡ್ಡ ಮತಕ್ಷೇತ್ರವು ತಾಂತ್ರಿಕವಾಗಿ ಕೊಳವೆಬಾವಿ ಕೊರೆಯಲು ಅತ್ಯಂತ ಕಠಿಣ ಪ್ರದೇಶವಾಗಿರುವ ಕಾರಣ, ಕೊಳವೆಬಾವಿ ಕೊರೆಯುವ ಸಂಸ್ಥೆಗಳು ನೀರಿಲ್ಲದಿದ್ದರೆ ಹಣವಿಲ್ಲ. ಎಂಬ ನಿಬಂಧನೆ ಮೇರೆಗೆ ಕೊಳವೆ ಬಾವಿ ಕೊರೆಯಲು ಮುಂದೆ ಬರುತ್ತಿಲ್ಲ. ಇದರಿಂದಾಗಿ ಈ ಸ್ಥಳದಲ್ಲಿ ಗಂಗಾ ಕಲ್ಯಾಣ ಯೋಜನೆಯು ಇದುವರೆವಿಗೂ ಪ್ರಾರಂಭವಾಗಲಿಲ್ಲ. ಆದಾಗ್ಯೂ ಇಂತಹ ಕಠಿಣ ಪ್ರದೇಶದಲ್ಲಿ ಕೆಲಸ ನಿರ್ವಹಿಸುವ ಸಾಮರ್ಥ್ಯದ ರಿಗ್ ಗಳನ್ನು ಹೊಂದಿರುವ ಸಂಸ್ಥೆಗಳನ್ನು ಗುರ್ತಿಸಿ ಮುಂದಿನ ಕ್ರಮ ತೆಗೆದುಕೊಳ್ಳಲಾಗುವುದು.

ಗುಳೇದಗುಡ್ಡ ವಿಧಾನಸಭಾ ಕ್ಷೇತ್ರದಲ್ಲಿ ಭೂ ಒಡೆತನ ಯೋಜನೆ.

96(367) ಶ್ರೀ ರಾಜಶೇಖರ ಶೀಲವಂತ ವೀರಣ್ಣ (ಗುಳೇದಗುಡ್ಡ) :— ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಗುಳೇದಗುಡ್ಡ ಮತಕ್ಷೇತ್ರದ ಕೆಲೂರ ಗ್ರಾಮದಲ್ಲಿ ಪರಿಶಿಷ್ಟ ಜಾತಿ ವರ್ಗಗಳ ಅಭಿವೃದ್ಧಿ ನಿಗಮದ ಭೂ ಒಡೆತನ ಯೋಜನೆ ಅಡಿಯಲ್ಲಿ 7 ಎಕರೆ ಜಮೀನು ಖರೀದಿ ಪ್ರಕರಣ ಒಂದು ವರ್ಷದಿಂದ ನೆನೆಗುದಿಗೆ ಬಿದ್ದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಆ) ಹಾಗಿದ್ದರೆ ಈ ಯೋಜನೆಗೆ ನೆನೆಗುದಿಗೆ ಬೀಳಲು ಕಾರಣಗಳೇನು?

ಇ) ಸದರಿ ಯೋಜನೆ ತೀವ್ರಗೊಳಿಸಲು ಸರ್ಕಾರದವರು ಕೈಗೊಳ್ಳಲಿರುವ ಕ್ರಮಗಳೇನು?

ಶ್ರೀ ಕೆ.ಎಂ. ಕೃಷ್ಣಾರೆಡ್ಡಿ (ಸಮಾಜ ಕಲ್ಯಾಣ ಸಚಿವರು) :—

ಅ) ಕೆಲೂರ ಗ್ರಾಮದ ಏಳು ಎತರೆ ಜಮೀನನ್ನು ಎಕರೆಗೆ ತಲಾ ರೂ.18,000-00 ರಂತೆ ಖರೀದಿಸಿ ಫಲಾನುಭವಿಗೆ ಹಂಚಲು ಮಂಜೂರಾತಿ ನೀಡಲಾಗಿದೆ. ಮಾರ್ಚ್ 99ರೊಳಗೆ ಸದರಿ ಜಮೀನನ್ನು ಫಲಾನುಭವಿಗಳ ಹೆಸರಿಗೆ ನೋಂದಣಿ ಮಾಡಿಸಿ ಕೊಡಲಾಗುವುದು.

ಅ) ಉದ್ಭವಿಸುವುದಿಲ್ಲ

ಇ) ಉದ್ಭವಿಸುವುದಿಲ್ಲ

ಗುಲ್ಬರ್ಗಾ ಜಿಲ್ಲೆಯಲ್ಲಿ ದೇವದಾಸಿಯರ ಪುನರ್ವಸತಿ.

97(417) ಶ್ರೀ ರೇವುನಾಯ್ಕ ಬೆಳಮಗಿ (ಕಮಲಾಪುರ) :— ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಗುಲ್ಬರ್ಗಾ ಜಿಲ್ಲೆಯಲ್ಲಿ ಇರುವ ದೇವದಾಸಿಯರ ಸಂಖ್ಯೆ ಎಷ್ಟು?

ಆ) ಇವರುಗಳಿಗೆ ಪುನರ್ವಸತಿ ಕಲ್ಪಿಸಲಾಗಿದೆಯೇ ಹಾಗೂ ಇವರಿಗೆ ಒದಗಿಸಲಾದ ಇತರೆ ಸೌಲಭ್ಯಗಳು ಯಾವುವು

ಇ) ಇವರ ಮಕ್ಕಳಿಗೆ ಶಿಕ್ಷಣ ನೀಡುವ ವ್ಯವಸ್ಥೆ ಮಾಡಲಾಗಿದೆಯೇ ಹಾಗೂ ಉದ್ಯೋಗ ಒದಗಿಸುವ ಬಗ್ಗೆ ಸರ್ಕಾರವು ತೆಗೆದುಕೊಂಡ ಕ್ರಮಗಳು ಯಾವುವು?

ಶ್ರೀ ಕೆ.ಎಂ. ಕೃಷ್ಣಾರೆಡ್ಡಿ (ಸಮಾಜ ಕಲ್ಯಾಣ ಸಚಿವರು) :—

ಅ) ಗುಲ್ಬರ್ಗಾ ಜಿಲ್ಲೆಯಲ್ಲಿ ಇರುವ ದೇವದಾಸಿಯರ ಸಂಖ್ಯೆ 991.

ಆ) ದೇವದಾಸಿ ಮಹಿಳೆಯರಿಗೆ ಕರ್ನಾಟಕ ಪರಿಶಿಷ್ಟ ಜಾತಿ ಪರಿಶಿಷ್ಟ ವರ್ಗಗಳ ಅಭಿವೃದ್ಧಿ ನಿಗಮದಿಂದ ಈ ಕೆಳಕಂಡಂತೆ ಸೌಲಭ್ಯಗಳನ್ನು ಒದಗಿಸಲಾಗಿದೆ.

1)	ಭೂ ಒಡೆತನ ಯೋಜನೆಯಲ್ಲಿ ಕೃಷಿ ಜಮೀನನ್ನು ನೀಡಿರುವುದು (31-1-99ರ ವರೆಗೆ)	137	ಮಹಿಳೆಯರಿಗೆ
2)	ಸ್ವಯಂ ಉದ್ಯೋಗ ಯೋಜನೆಯಲ್ಲಿ ಸೌಲಭ್ಯ ಕಲ್ಪಿಸಿರುವುದು	223	"
3)	ಮನೆ ಹಾಗೂ ಕೊಟ್ಟಿಗೆ ನಿರ್ಮಾಣ (ನಿರ್ಮಾಣ ಕಾರ್ಯವು ನಡೆಯುತ್ತಿದೆ)	200	"

ಇ) ದೇವದಾಸಿಯರ ಮಕ್ಕಳಿಗೆ ಶಿಕ್ಷಣ ನೀಡುವ ಮತ್ತು ಉದ್ಯೋಗ ಒದಗಿಸುವ ಬಗ್ಗೆ ಪ್ರತ್ಯೇಕವಾದ ಯಾವುದೇ ಯೋಜನೆಯನ್ನು ಕರ್ನಾಟಕ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಅಭಿವೃದ್ಧಿ ನಿಗಮದಿಂದಾಗಲಿ ಅಥವಾ ಸಮಾಜ ಕಲ್ಯಾಣ